# ಕುವೆಂಪು ವಿಶ್ವವಿದ್ಯಾಲಯ

ಕುಲಸಚಿವರ(ಪರೀಕ್ಷಾಂಗ)ರವರ ಕಛೇರಿ.
ಜ್ಞಾನಸಹ್ಯಾದ್ರಿ, ಶಂಕರಘಟ್ಟ–577451, ಶಿವಮೊಗ್ಗ, ಕರ್ನಾಟಕ.
ಫೋನ್ ನಂಬರ್: 08282–256166, ಇ–ಮೇಲ್: regexamku@gmail.com, ವೆಬ್‌ಸೈಟ್: www.kuvempu.ac.in

**Re-Accredited by NAAC with 'A' Grade, Ranked 73rd Place in NIRF– 2019 and Secured 45th Place in SCIMAGO Institutional Rankings**

ಸಂಖ್ಯೆ:ಕುವಿ:ಪವಿ:ಪಿಜಿ: 3127 :2021–22: ದಿನಾಂಕ:07–10–2021

## <u>ಪರೀಕ್ಷಾ ಪ್ರಕಟಣೆ</u>

**ವಿಷಯ** : ನವೆಂಬರ್–2021ರಲ್ಲಿ ನಡೆಯುವ ಸ್ನಾತಕೋತ್ತರ ಡಿಪ್ಲೋಮಾ ಪದವಿ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ಬಗ್ಗೆ.

*****

ಕುವೆಂಪು ವಿಶ್ವವಿದ್ಯಾಲಯದ ಪಿ. ಜಿ. ಡಿಪ್ಲೋಮಾ ಪರೀಕ್ಷೆಗಳು ನವೆಂಬರ್–**2021**ರಲ್ಲಿ ನಡೆಯಲಿದ್ದು ವಿವರವಾದ ವೇಳಾಪಟ್ಟಿಯನ್ನು ನಂತರ ಪ್ರಕಟಿಸಲಾಗುವುದು. ಪರೀಕ್ಷೆ ತೆಗೆದುಕೊಳ್ಳಲು ಅರ್ಹರಾದ ಪಿ. ಜಿ. ಡಿಪ್ಲೋಮಾ ಇನ್ ಆರ್ಕಿಯಾಲಜಿ ಅಂಡ್ ಮ್ಯೂಜಿಯಾಲಜಿ, ಮತ್ತು ಪಿ. ಜಿ. ಡಿಪ್ಲೋಮಾ ಇನ್ ಯೋಗ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಗಳನ್ನು ಭರ್ತಿ ಮಾಡಿ ನಿಗದಿತ ದಿನಾಂಕದೊಳಗೆ ಶುಲ್ಕ ಸಂದಾಯ ಮಾಡಿ ವಿಭಾಗಾಧ್ಯಕ್ಷರು / ಕಾಲೇಜಿನ ಪ್ರಾಂಶುಪಾಲರ ಮುಖಾಂತರ ಕುಲಸಚಿವ(ಪರೀಕ್ಷಾಂಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

| ಪರೀಕ್ಷಾ ಶುಲ್ಕ ಪಾವತಿಸಲು ಮತ್ತು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ದಿನಾಂಕ: 16–10–2021 | | |
|---|---|---|
| | ಶುಲ್ಕದ ವಿವರ. | |
| 1. | ಪರೀಕ್ಷಾ ಶುಲ್ಕ | ರೂ.1280/– |
| 2. | ಅಂಕಪಟ್ಟಿ ಶುಲ್ಕ | ರೂ. 220/– |
| 3. | ಘಟಿಕೋತ್ಸವ ಶುಲ್ಕ (ಅ)ಸಾಮಾನ್ಯ ವಿದ್ಯಾರ್ಥಿಗಳಿಗೆ.<br>(ಆ)ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ. | ರೂ. 950/–<br>ರೂ. 825/– |

## *<u>ವಿದ್ಯಾರ್ಥಿಗಳಿಗೆ ಸೂಚನೆ</u>*

1. ವಿದ್ಯಾರ್ಥಿಗಳು online ಮುಖಾಂತರ ಅರ್ಜಿ ಸಲ್ಲಿಸಲು www.kuvempu.ac.in ನಲ್ಲಿ student portalಗೆ login ಆಗಿ ನೊಂದಣಿ ಸಂಖ್ಯೆ, ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ವಿಷಯವಾರು ಗುರುತು ಮಾಡಿದ ನಂತರ ಶುಲ್ಕ ವಿವರಗಳುಳ್ಳ ಅರ್ಜಿ ಮುದ್ರಿಸಿ ನೆಟ್ ಬ್ಯಾಂಕಿಂಗ್‌ನಲ್ಲಿ ಶುಲ್ಕ ಭರಿಸಿದ ನಂತರ ಪ್ರತಿಯನ್ನು ವಿಭಾಗ / ಕಾಲೇಜುಗಳಲ್ಲಿ ಸಲ್ಲಿಸಬೇಕು.

2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಯಾವುದೇ ATM (Debit) Card/Credit Card/Online Banking / Paytm wallet ಮೂಲಕ ನೇರವಾಗಿ ಪಾವತಿಸಬಹುದಾಗಿದೆ. ಆನ್‌ಲೈನ್‌ನಲ್ಲಿ ಚಲನ್ ಮುದ್ರಿಸಿಕೊಂಡು ಪಾವತಿಸಿದ ನಂತರ ಸಂಬಂಧಿಸಿದ ಚಲನ್ ಪ್ರತಿ ಮತ್ತು ದಾಖಲಾತಿಗಳನ್ನು ವಿಭಾಗ /ಕಾಲೇಜಿಗೆ ಸಲ್ಲಿಸಬೇಕು. ನಿಗದಿಪಡಿಸಿದ ದಿನಾಂಕದ ನಂತರ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

| | |
|---|---|
| ವಿಶೇಷ ಸೂಚನೆ: | **ವಿದ್ಯಾರ್ಥಿಗಳು Internet Browsing Centreನ ಮಾಲೀಕರ ಬ್ಯಾಂಕ್ ಖಾತೆಯ ಮೂಲಕ ವಿಶ್ವವಿದ್ಯಾಲಯಕ್ಕೆ ಶುಲ್ಕ ಪಾವತಿಸಿದಲ್ಲಿ ಉಂಟಾಗುವ ತಾಂತ್ರಿಕ ತೊಂದರೆಗಳಿಗೆ ವಿದ್ಯಾರ್ಥಿಗಳೇ ಜವಾಬ್ದಾರರು.** |

ಅ. ಕುಟುಂಬದ ವಾರ್ಷಿಕ ಆದಾಯ ರೂ. 2.5 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಇರುವ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ Freshers ವಿದ್ಯಾರ್ಥಿಗಳಿಗೆ ಮಾತ್ರ ನಿಯಮಾನುಸಾರ ಶುಲ್ಕ ವಿನಾಯಿತಿ ಇರುತ್ತದೆ. ಆದರೆ ಅಂತಹ ಅಭ್ಯರ್ಥಿಗಳು ಅಂಕಪಟ್ಟಿ ಶುಲ್ಕ ರೂ. 220/-ಗಳನ್ನು ಪಾವತಿಸಬೇಕು.

ಆ. ಕುಟುಂಬದ ವಾರ್ಷಿಕ ಆದಾಯ ರೂ. 2.5 ಲಕ್ಷಕ್ಕೆ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

ಇ. ವಿನಾಯಿತಿ ಹೊಂದಿರುವ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಅವರುಗಳಿಗೆ ಮಂಜೂರಾಗುವ ವಿದ್ಯಾರ್ಥಿ ವೇತನದಿಂದ ಕಟಾಯಿಸಿ ಆಯಾ ಕಾಲೇಜುಗಳ ಪ್ರಾಂಶುಪಾಲರು / ವಿಭಾಗಾಧ್ಯಕ್ಷರು ವಿಶ್ವವಿದ್ಯಾಲಯದ F&R ಖಾತೆ ಸಂಖ್ಯೆ- 54023036246ಕ್ಕೆ ಜಮಾ ಮಾಡಬೇಕು. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳಿಂದ ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳತಕ್ಕದ್ದು.

ಕುಟುಂಬದ ವಾರ್ಷಿಕ ಆದಾಯದ ಗರಿಷ್ಟ ಮಿತಿ ಪ್ರವರ್ಗ-1ಕ್ಕೆ 2.5ಲಕ್ಷ ಹಾಗೂ ಪ್ರವರ್ಗ 2ಎ, 2ಬಿ, 3ಎ, 3ಬಿ ಮತ್ತು ಇತರೆ ವರ್ಗಕ್ಕೆ ರೂ. 1 ಲಕ್ಷ ಗರಿಷ್ಟ ಮಿತಿ ನಿಗದಿಪಡಿಸಿರುವ ಹಿನ್ನೆಲೆಯಲ್ಲಿ ಕುಟುಂಬದ ವಾರ್ಷಿಕ ಆದಾಯದ ಈ ಗರಿಷ್ಟ ಮಿತಿಯನ್ನು ಮೀರಿದ Freshers ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟು ಶುಲ್ಕ ಮರುಭರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ: ಸ.ಕ.ಇ./201/ಬಿ.ಎಂ.ಎಸ್/2011 ಬೆಂಗಳೂರು ದಿನಾಂಕ: 23-06-2012ರಲ್ಲಿ ತಿಳಿಸಿರುತ್ತಾರೆ.

3. **ಪರಿಶಿಷ್ಟಜಾತಿ:ಪರಿಶಿಷ್ಟಪಂಗಡ ಹಾಗೂ ಮೇಲ್ಕಂಡ ಮೀಸಲಾತಿಗೆ ಒಳಪಡುವ ವರ್ಗಗಳ ಮರುಯತ್ನದ (Repeaters) ವಿದ್ಯಾರ್ಥಿಗಳಿಗೆ ಹಾಗೂ ವಿಳಂಬ ಶುಲ್ಕದೊಂದಿಗೆ ಪರೀಕ್ಷಾ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕ ವಿನಾಯ್ತಿ ಇರುವುದಿಲ್ಲ.**

4. ಶುಲ್ಕ ವಿನಾಯಿತಿ ಬಯಸುವ ಎಲ್ಲಾ ವಿದ್ಯಾರ್ಥಿಗಳು ಸಕ್ಷಮ ಅಧಿಕಾರಿಗಳಿಂದ ಪಡೆದ ಆದಾಯ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ವಿಭಾಗ / ಕಾಲೇಜಿಗೆ ಒಪ್ಪಿಸಬೇಕು.

5. ವಿದ್ಯಾರ್ಥಿಗಳು ಪಾವತಿಸುವ ಪರೀಕ್ಷಾ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿ ಮಾಡುವುದಿಲ್ಲ.

6. ಈಗಾಗಲೇ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ್ದು ಫಲಿತಾಂಶ ನಿರೀಕ್ಷೆಯಲ್ಲಿರುವ ವಿದ್ಯಾರ್ಥಿಗಳೂ ಸಹ ನಿಗದಿತ ಸಮಯದಲ್ಲಿ ಪರೀಕ್ಷಾ ಶುಲ್ಕ ಪಾವತಿಸಬೇಕು.

7. ಕನಿಷ್ಟ ಶೇ. 75ರಷ್ಟು ಹಾಜರಾತಿ ಗಳಿಸದ ವಿದ್ಯಾರ್ಥಿಗಳು ಪರೀಕ್ಷಾ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

## ವಿಭಾಗದ ಮುಖ್ಯಸ್ಥರು / ಪ್ರಾಚಾರ್ಯರಿಗೆ ಸೂಚನೆಗಳು

1. **ಕೋವಿಡ್-19ರ ಹಿನ್ನೆಲೆಯ ಲಾಕ್‌ಡೌನ್‌ನಿಂದಾಗಿ ವಿದ್ಯಾರ್ಥಿಗಳು ಸ್ವಸ್ಥಳಗಳಿಗೆ ತೆರಳುವ ಸಾಧ್ಯತೆಗಳು ಇರುವುದರಿಂದ ಪರೀಕ್ಷಾ ಶುಲ್ಕ ಪಾವತಿಸುವ ಮಾಹಿತಿಯು ಪ್ರತಿಯೊಬ್ಬ ವಿದ್ಯಾರ್ಥಿಗೂ ತಲುಪುವಂತೆ ಆಯಾ ವಿಭಾಗಾಧ್ಯಕ್ಷರು/ಕಾಲೇಜು ಪ್ರಾಂಶುಪಾಲರುಗಳು ನಿಗಾ ವಹಿಸತಕ್ಕದ್ದು.**

2. ನಿಯಮಾನುಸಾರ ಅರ್ಹರಾದ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಅರ್ಜಿ ಹಾಗೂ ಶುಲ್ಕ ಸಂಗ್ರಹಿಸಬೇಕು. ಹಾಗೂ **ಒಂದು ಪ್ರತಿಯನ್ನು ವಿಭಾಗದಲ್ಲಿ ಮಾಹಿತಿಗಾಗಿ ಸಂರಕ್ಷಿಸಿಕೊಳ್ಳುವುದು.**

3. ಹಾಜರಾತಿ ಕೊರತೆ ಇರುವಂತಹ ಹಾಗೂ ಪ್ರವೇಶಾನುಮೋದನೆಯಾಗದ ವಿದ್ಯಾರ್ಥಿಗಳ ಪಟ್ಟಿಯನ್ನು ಪರೀಕ್ಷೆಗಳು ಆರಂಭವಾಗುವ 15 ದಿನ ಮುಂಚಿತವಾಗಿ ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಲ್ಲಿಸುವುದು. ಒಂದು ವೇಳೆ ಹಾಜರಾತಿ ಕೊರತೆ ಇರುವ ಹಾಗೂ ಪ್ರವೇಶಾನುಮೋದನೆಯಾಗದೇ ಇರುವ / ಅರ್ಹತೆಯಿಲ್ಲದೆ ಇರುವ ವಿದ್ಯಾರ್ಥಿಗಳು ಪರೀಕ್ಷಾ ಅರ್ಜಿ ಸಲ್ಲಿಸಿದ್ದಲ್ಲಿ/ಪರೀಕ್ಷೆ ತೆಗೆದುಕೊಂಡಲ್ಲಿ ಮುಂದಿನ ಎಲ್ಲಾ ತರಹದ ತೊಂದರೆಗಳಿಗೆ ವಿಭಾಗದ ಮುಖ್ಯಸ್ಥರು / ಕಾಲೇಜಿನ ಪ್ರಾಂಶುಪಾಲರು ನೇರ ಜವಾಬ್ದಾರರಾಗಿರುತ್ತಾರೆ.

4. ಕುಟುಂಬದ ವಾರ್ಷಿಕ ಆದಾಯ ರೂ. 2.5 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಇರುವ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ Freshers ವಿದ್ಯಾರ್ಥಿಗಳಿಗೆ ಮಾತ್ರ ನಿಯಮಾನುಸಾರ ಶುಲ್ಕ ವಿನಾಯಿತಿ ಇರುತ್ತದೆ. ಆದರೆ ಅಂತಹ ಅಭ್ಯರ್ಥಿಗಳು ಅಂಕಪಟ್ಟಿ ಶುಲ್ಕ ರೂ. 220/–ಗಳನ್ನು ಪಾವತಿಸಬೇಕು.

5. ರೂ. 2.5 ಲಕ್ಷಗಳ ಆದಾಯಕ್ಕಿಂತ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

**ವಿಶೇಷ ಸೂಚನೆ:** **ಶುಲ್ಕ ವಿನಾಯಿತಿ ಅರ್ಹತೆ ಹೊಂದಿರುವ ಎಲ್ಲಾ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲಿಸಿ ನಂತರವೇ OASIS Portalನಲ್ಲಿ college login ಆಗಿ Before exam → Exam Application → Eligibility, Fee Concession, Block Hall Ticket Option ನಲ್ಲಿ "Concession Fee Applicable" ಅನ್ನು Tick (✔) ಚಿನ್ಹೆಯಿಂದ ಗುರುತಿಸಬೇಕು. ಇಲ್ಲವಾದಲ್ಲಿ onlineನಲ್ಲಿ ವಿದ್ಯಾರ್ಥಿಗಳು ಪೂರ್ಣ ಶುಲ್ಕ ಪಾವತಿಸಬೇಕಾಗುತ್ತದೆ.**

6. ವಿನಾಯಿತಿ ಹೊಂದಿರುವ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಅವರುಗಳಿಗೆ ಮಂಜೂರಾಗುವ ವಿದ್ಯಾರ್ಥಿ ವೇತನದಿಂದ ಕಟಾಯಿಸಿ ಆಯಾ ಕಾಲೇಜುಗಳ ಪ್ರಾಂಶುಪಾಲರು ವಿಶ್ವವಿದ್ಯಾಲಯದ F&R ಖಾತೆ ಸಂಖ್ಯೆ– 54023036246 ಜಮಾ ಮಾಡಬೇಕು. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳಿಂದ ಪೂರ್ಣ ಪರೀಕ್ಷಾ ಶುಲ್ಕ ವಸೂಲು ಮಾಡಿ ಮಾಹಿತಿಯನ್ನು (Hard Copy)ಯಲ್ಲಿ ಪರೀಕ್ಷಾ ವಿಭಾಗದ ಲೆಕ್ಕ ಶಾಖೆಗೆ ಸಲ್ಲಿಸುವುದು.

7. ಕಡೇ ದಿನಾಂಕದ ನಂತರ ಪರೀಕ್ಷಾಂಗ ವಿಭಾಗದಲ್ಲಿ ಪ್ರತಿ ವಿಭಾಗ / ಕಾಲೇಜಿನ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಪರಿಶೀಲಿಸಲಾಗುವುದು. ಶುಲ್ಕ ಪಾವತಿ ಸಮರ್ಪಕವಾಗಿ ಕಂಡುಬರದೇ ಇರುವ ಪಕ್ಷದಲ್ಲಿ ಆ ವಿದ್ಯಾರ್ಥಿಯ ಪರೀಕ್ಷಾ ಪ್ರವೇಶ ಪತ್ರವನ್ನು ನೀಡಲಾಗುವುದಿಲ್ಲ.

8. ಪ್ರಾಯೋಗಿಕ / ಸೈದ್ಧಾಂತಿಕ ಪರೀಕ್ಷೆಗೆ ಅಗತ್ಯವಾದ ಉತ್ತರ ಪತ್ರಿಕೆ / ಲೇಖನ ಸಾಮಗ್ರಿ ಹಾಗೂ ಮುದ್ರಿತ ನಮೂನೆಗಳಿಗೆ ಬೇಡಿಕೆಪಟ್ಟಿಗಳನ್ನು **ದಿನಾಂಕ: 18–10–2021 ರೊಳಗಾಗಿ ಶಾಖಾಧಿಕಾರಿಗಳು, ಲೆಕ್ಕ ಶಾಖೆ(ಪರೀಕ್ಷಾ ವಿಭಾಗ)** ಇವರಿಗೆ ತಲುಪಿಸಲು ಸೂಚಿಸಿದೆ.

9. ಪ್ರಶ್ನೆ ಪತ್ರಿಕೆಗಳ ಬೇಡಿಕೆಯನ್ನು **ದಿನಾಂಕ: 18–10–2021 ರೊಳಗಾಗಿ ಉಪಕುಲಸಚಿವ (ಪರೀಕ್ಷಾಂಗ–ರಹಸ್ಯ ವಿಭಾಗ)** ಇವರಿಗೆ ತಲುಪಿಸಲು **ಸೂಚಿಸಿದೆ.**

10. **ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ವಿದ್ಯಾರ್ಥಿಗಳ ಗಮನಕ್ಕೆ ತಂದು, ವಿದ್ಯಾರ್ಥಿಗಳ ಸಹಿ ಪಡೆದು, ದಿನಾಂಕ: 30–10–2021ರೊಳಗೆ ಆನ್‌ಲೈನ್ ಮೂಲಕ ದಾಖಲಿಸಿ ನಂತರ Freeze ಮಾಡಬೇಕು.**

11. **ಸೈದ್ಧಾಂತಿಕ ಪರೀಕ್ಷೆ ಪ್ರಾರಂಭಕ್ಕೆ ಮುಂಚೆ ಆಂತರಿಕ ಅಂಕಗಳಿಗೆ ಸಂಬಂಧಿಸಿದಂತೆ, ಯಾವುದೇ ತೊಂದರೆಗಳಿದ್ದಲ್ಲಿ ಅದನ್ನು ಬಗೆಹರಿಸಿಕೊಳ್ಳಬೇಕು. ತದನಂತರ ಬರುವಂತಹ ಆಂತರಿಕ ಅಂಕಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.**

12. ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳಿಂದ ಪರೀಕ್ಷೆಗಳಿಗೆ ಅರ್ಜಿಯನ್ನು ಸ್ವೀಕರಿಸಬಾರದು, ಮತ್ತು ಅಂತಹ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಪರೀಕ್ಷೆ ಕೂಡ ನಡೆಸಬಾರದು.

ಅಂತಹ ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿ ಸ್ವೀಕರಿಸಿದಲ್ಲಿ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು / ಕಾಲೇಜಿನ ಮುಖ್ಯಸ್ಥರು ಜವಾಬ್ದಾರರಾಗಿರುತ್ತಾರೆ.

13. ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿರುವಂತಹ (ಕಾಲೇಜು ಮತ್ತು ವಿಶ್ವವಿದ್ಯಾಲಯವನ್ನು ಪ್ರತಿನಿಧಿಸಿ) ವಿಭಾಗ / ಕಾಲೇಜುಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡ ನಿಗದಿತ ಸಮಯದೊಳಗೆ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವಂತೆ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು/ಕಾಲೇಜಿನ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.

14. **ಯಾವುದೇ ವಿದ್ಯಾರ್ಥಿಯ ಆಂತರಿಕ ಅಂಕ ಬಿಟ್ಟುಹೋದಲ್ಲಿ ಯಾವ ಕಾರಣಕ್ಕೂ ಹಾರ್ಡ್‌ಕಾಪಿಯನ್ನು ನಂತರ ವಿಭಾಗ / ಕಾಲೇಜಿನಿಂದ ಕಳುಹಿಸಿಕೊಟ್ಟಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ ಅಂತಹ ಮನವಿಗಳನ್ನು ತಿರಸ್ಕರಿಸಲಾಗುವುದು.**

ಕುಲಸಚಿವರು(ಪರೀಕ್ಷಾಂಗ)

ಕುಲಸಚಿವರು (ಪರೀಕ್ಷಾಂಗ)
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ,
ಶಂಕರಘಟ್ಟ - 577 451

07/10/21

ಗೆ,

1. ಮುಖ್ಯಸ್ಥರು, ಪಿ.ಜಿ.ಡಿಪ್ಲೋಮಾ ಇನ್ ಆರ್ಕಿಯಾಲಜಿ ಅಂಡ್ ಮ್ಯೂಜಿಯಾಲಜಿ, ಇತಿಹಾಸ ಮತ್ತು ಪುರಾತತ್ವಶಾಸ್ತ್ರ, ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
2. ಮುಖ್ಯಸ್ಥರು, ಪಿ.ಜಿ.ಡಿಪ್ಲೋಮಾ ಇನ್ ಯೋಗ, ದೈಹಿಕ ಶಿಕ್ಷಣ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
3. ಮುಖ್ಯಸ್ಥರು, ಪಿ.ಜಿ.ಡಿಪ್ಲೋಮಾ ಇನ್ ಯೋಗ, ಶ್ರೀ ಶಿವಗಂಗಾ ಯೋಗ ಮಹಾವಿದ್ಯಾಲಯ, ಅಭೀಷ್ಟವರದ ಗಣಪತಿ ದೇವಸ್ಥಾನದ ಮುಂಭಾಗ, ಕಲ್ಲಹಳ್ಳಿ, ವಿನೋಬ ನಗರ, ಶಿವಮೊಗ್ಗ.

ಪ್ರತಿಗಳು :

01. ಆಪ್ತ ಶಾಖೆ, ಮಾನ್ಯ ಕುಲಪತಿ, ಕುಲಸಚಿವ(ಆಡಳಿತ), ಕುಲಸಚಿವ (ಪರೀಕ್ಷಾಂಗ) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
02. ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
03. ನಿರ್ದೇಶಕರು, ಪಿ.ಎಂ.ಇ ಮಂಡಳಿ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
04. ಸಂಚಾಲಕರು, ಎಸ್.ಸಿ./ಎಸ್.ಟಿ. ಸೆಲ್, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
05. ಸಂಚಾಲಕರು, ಒ.ಬಿ.ಸಿ. ಸೆಲ್, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
06. ಸರ್ಕಾರಿ ಲೆಕ್ಕಪರಿಶೋಧಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
07. ಉಪಕುಲಸಚಿವರು, ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
08. ಶಾಖಾಧಿಕಾರಿಗಳು, ದಾಸ್ತಾನು ಮತ್ತು ಖರೀದಿ ವಿಭಾಗ, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
09. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
10. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
11. ನಿರ್ದೇಶಕರು, UCCF ಕಛೇರಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
12. ಕಂಪ್ಯೂಟರ್ ಪ್ರೋಗ್ರಾಮರ್, ಕಂಪ್ಯೂಟರ್ ವಿಭಾಗ/ವಿಷಯ ನಿರ್ವಾಹಕರು, ರಹಸ್ಯ ವಿಭಾಗ, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
13. ಮೆ॥ ಲಾಜಿಸಿಸ್ ಸಂಸ್ಥೆ, ಕಂಪ್ಯೂಟರ್ ವಿಭಾಗ, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ – ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.
14. ಕಛೇರಿ ಪ್ರತಿ.